## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2019-20 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆಯನ್ನು ಅನುಷ್ಠಾನಗೊಳಿಸಲು ರಾಜ್ಯ ಮಟ್ಟದ ಉಸ್ತುವಾರಿ ಸಮಿತಿ ರಚನೆ ಕುರಿತು.

ಓದಲಾಗಿದೆ: 1. ಸರ್ಕಾರದ ಆದೇಶ ಸಂ: ಸಿಆಸುಇ 73 ಇಆಇ 2018, ದಿ:30.08.2018.

2. ಸರ್ಕಾರದ ಆದೇಶ ಸಂ: ಕೃಇ 34 ಕೃಕೈಉ 2019, ಬೆಂಗಳೂರು ದಿನಾಂಕ:05.07.2019.

******

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ:1 ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2018ರ ಮುಂಗಾರು ಬೆಳೆಯ ಸಮೀಕ್ಷೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಮತ್ತು ಇ-ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಸಹ-ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ: 2 ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯದಲ್ಲಿ 2019-20ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಕಾರ್ಯವನ್ನು ಕೃಷಿ ಇಲಾಖೆಯ ವತಿಯಿಂದ ಸಿಆಸು (ಇ-ಆಡಳಿತ) ಇಲಾಖೆಯ ಸಹಯೋಗದೊಂದಿಗೆ ಮೊಬೈಲ್ ಆಪ್ ಮುಖಾಂತರ ಕೈಗೊಳ್ಳಲು ಸರ್ಕಾರವು ಅನುಮತಿ ನೀಡಿರುತ್ತದೆ. ಅದರನ್ವಯ ಸದರಿ ಬೆಳೆ ಸಮೀಕ್ಷೆಯನ್ನು ಅನುಷ್ಠಾನಗೊಳಿಸಲು ಹಾಗೂ ಸದರಿ ಸಮೀಕ್ಷೆಯ ಉಸ್ತುವಾರಿಯನ್ನು ಕೈಗೊಳ್ಳುವ ಸಲುವಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಮತ್ತು ಇ-ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಸಹ-ಅಧ್ಯಕ್ಷತೆಯಲ್ಲಿ ಸದರಿ ಸಮೀಕ್ಷೆ ಯೋಜನೆಯಲ್ಲಿ ಭಾಗಿಯಾಗುವ ಇತರೆ ಇಲಾಖೆಗಳ ಕಾರ್ಯದರ್ಶಿಗಳನ್ನೊಳಗೊಂಡಂತೆ ರಾಜ್ಯ ಮಟ್ಟದ ಉಸ್ತುವಾರಿ ಸಮಿತಿಯನ್ನು ಪುನರ್‌ರಚಿಸಬೇಕಾಗಿರುವುದನ್ನು ಮನಗಂಡು ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 34 ಕೃಕೈಉ 2019(1), ಬೆಂಗಳೂರು. ದಿನಾಂಕ:05.07.2019.**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಬೆಳೆ ಸಮೀಕ್ಷೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವ ಸಲುವಾಗಿ ಈ ಕೆಳಕಂಡ ರಾಜ್ಯ ಮಟ್ಟದ ಉಸ್ತುವಾರಿ ಸಮಿತಿಯನ್ನು ರಚಿಸಿ ಸರ್ಕಾರವು ಆದೇಶಿಸಿದೆ.

| ಕ್ರ.ಸಂ. | ಹುದ್ದೆ ಮತ್ತು ಪದನಾಮ | ವಿವರ |
|---|---|---|
| 1 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು | ಅಧ್ಯಕ್ಷರು |
| 2 | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿ.ಆ.ಸು.ಇ (ಇ-ಆಡಳಿತ) | ಸಹ-ಅಧ್ಯಕ್ಷರು |
| 3 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ. | ಸದಸ್ಯರು |
| 4 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ, ಭೂಮಿ ಮತ್ತು ಯುಪಿಓಆರ್) | ಸದಸ್ಯರು |
| 5 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ. | ಸದಸ್ಯರು |
| 6 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾ ಇಲಾಖೆ. | ಸದಸ್ಯರು |

--

| | | |
|---|---|---|
| 7 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ. | ಸದಸ್ಯರು |
| 8 | ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ. | ಸದಸ್ಯರು |
| 9 | ಸರ್ಕಾರದ ಕಾರ್ಯದರ್ಶಿಗಳು, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ. | ಸದಸ್ಯರು |
| 10 | ಆಯುಕ್ತರು, ಭೂಮಾಪನ ಹಾಗೂ ಕಂದಾಯ ವ್ಯವಸ್ಥೆ ಇಲಾಖೆ ಹಾಗೂ ನಿರ್ದೇಶಕರು, ಭೂಮಿ ಮತ್ತು ಯುಪಿಓಆರ್ | ಸದಸ್ಯರು |
| 11 | ಆಯುಕ್ತರು, ಕೃಷಿ ಇಲಾಖೆ | ಸದಸ್ಯರು |
| 12 | ಆಯುಕ್ತರು, ರೇಷ್ಮೆ ಇಲಾಖೆ | ಸದಸ್ಯರು |
| 13 | ನಿರ್ದೇಶಕರು, ತೋಟಗಾರಿಕೆ ಇಲಾಖೆ | ಸದಸ್ಯರು |
| 14 | ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, | ಸದಸ್ಯರು |
| 15 | ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯ–ಕಾರ್ಯದರ್ಶಿ |

<u>ಸಮಿತಿಯ ಪಾತ್ರ ಮತ್ತು ಜವಾಬ್ದಾರಿಗಳು:</u>

1. ಬೆಳೆ ಸಮೀಕ್ಷೆ ಪ್ರಗತಿಯ ಪರಿಶೀಲನೆ
2. ಬೆಳೆ ಸಮೀಕ್ಷೆ ಯೋಜನೆಯನ್ನು ನಿಗಧಿತ ಅವಧಿಯಲ್ಲಿ ಅನುಷ್ಠಾನಗೊಳಿಸುವ ದಿಸೆಯಲ್ಲಿ ಭಾಗೀದಾರ ಇಲಾಖೆಗಳಿಗೆ ನಿರ್ದೇಶನಗಳನ್ನು ನೀಡುವುದು.
3. ಬೆಳೆ ಸಮೀಕ್ಷೆ ಮಾಹಿತಿಯ ಬಳಕೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ:ಕೃಇ 34 ಕೃಕೈಲು 2019 ರ ದಿನಾಂಕ:05.07.2019ರ ಆದೇಶದಲ್ಲಿ ಸೂಚಿಸಿರುವ ಯೋಜನೆಗಳನ್ನು ಹೊರತುಪಡಿಸಿ, ಬೇರೆ ಯೋಜನೆಗಳಲ್ಲಿ ಬೆಳೆ ಸಮೀಕ್ಷೆ ಯೋಜನೆಯಡಿ ಸಂಗ್ರಹಿಸಲಾದ ಮಾಹಿತಿಗಳನ್ನು ಬಳಸಲು ತೀರ್ಮಾನಿಸುವುದು.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

B S Nagarathnam

(ಬಿ.ಎಸ್ ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ).
05/07/19

<u>ಇವರಿಗೆ:–</u>

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿ.ಆಸು.ಇ(ಇ–ಆಡಳಿತ), ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ, ಭೂಮಿ ಮತ್ತು ಯುಪಿಓಆರ್), ಬಹುಮಹಡಿ ಕಟ್ಟಡ, ಬೆಂಗಳೂರು.

7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು; ಗ್ರಾ.ಅ ಮತ್ತು ಪಂ.ರಾ ಇಲಾಖೆ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಬೆಂಗಳೂರು.
11. ಆಯುಕ್ತರು, ಭೂಮಾಪನ ಹಾಗೂ ಕಂದಾಯ ವ್ಯವಸ್ಥೆ ಇಲಾಖೆ ಹಾಗೂ ನಿರ್ದೇಶಕರು, ಭೂಮಿ ಮತ್ತು ಯುಪಿಓಆರ್, ಬೆಂಗಳೂರು.
12. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
13. ಆಯುಕ್ತರು,/ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಬೆಂಗಳೂರು.
14. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಇ-ಆಡಳಿತ ಕೇಂದ್ರ, ಬೆಂಗಳೂರು.
15. ನಿರ್ದೇಶಕರು, ವಿದ್ಯುನ್ಮಾನ ನಾಗರೀಕ ಸೇವಾ ವಿತರಣಾ ನಿರ್ದೇಶನಾಲಯ, ಬೆಂಗಳೂರು.
16. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.
17. ಎಲ್ಲಾ ಜಿಲ್ಲಾಧಿಕಾರಿಗಳು.
18. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
19. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
20. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
21. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
22. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
23. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಗಳು
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು